ಫ್ಯಾಕ್ಸ್ : 080 – 2202 8041 ದೂರವಾಣಿ : 080 – 2202 8032

# ಕರ್ನಾಟಕ ಸರ್ಕಾರ
## ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಸಾಸಂಇ : ಉ ನಿ : ಸುಮಪ : 2014–15 : ದಿನಾಂಕ: 01–12–2014

## ಪತ್ರಿಕಾ ಪ್ರಕಟಣೆ

### ಎರಡು ತಿಂಗಳಲ್ಲಿ ನೀರಿನ ದರ ಪರಿಷ್ಕರಣೆ: ಪರಿಶೀಲನೆಗೆ ಸಮಿತಿ ರಚನೆ– ಸಚಿವ ಎಂ.ಬಿ. ಪಾಟೀಲ

ಬೆಂಗಳೂರು, ಡಿ. 1 (ಕರ್ನಾಟಕ ವಾರ್ತೆ)–

ಜಲಸಂಪನ್ಮೂಲ ಇಲಾಖೆಯು ನೀರಿನ ದರ ಪರಿಷ್ಕರಣೆಗಾಗಿ ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿಯವರ ಅಧ್ಯಕ್ಷತೆಯಲ್ಲಿ ಸಮಿತಿಯನ್ನು ರಚಿಸಿದ್ದು, ಎರಡು ತಿಂಗಳೊಳಗೆ ಕೃಷಿ, ಕೈಗಾರಿಕೆ ಹಾಗೂ ಕುಡಿಯುವ ನೀರಿನ ದರಗಳನ್ನು ಪರಿಷ್ಕರಿಸಲಾಗುವುದು ಎಂದು ಜಲಸಂಪನ್ಮೂಲ ಸಚಿವ ಶ್ರೀ ಎಂ.ಬಿ. ಪಾಟೀಲ ಅವರು ತಿಳಿಸಿದರು.

ಅವರು ಇಂದು ವಿಧಾನಸೌಧದಲ್ಲಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡುತ್ತಿದ್ದರು. ಕರ್ನಾಟಕ ನೀರಾವರಿ ಕಾಯ್ದೆ 1957ರ ಪ್ರಕಾರ ನೀರಿನ ದರವನ್ನು ಯೋಜನೆಗಳಲ್ಲಿ ನೀಡಿರುವ ಸವಲತ್ತುಗಳು ಹಾಗೂ ಬೆಳೆಗಳನ್ನು ಆಧರಿಸಿ ನಿರ್ಧರಿಸಲಾಗುತ್ತದೆ. ಇದಕ್ಕೂ ಮುನ್ನ ನೀರಿನ ದರಗಳು 2002ರ ಅಕ್ಟೋಬರ್‌ನಲ್ಲಿ ಪರಿಷ್ಕರಣೆಯಾಗಿದೆ. ಆದ್ದರಿಂದ ನೀರಿನ ದರ ಪರಿಷ್ಕರಣೆಯ ಕುರಿತು ಪರಿಶೀಲಿಸಲು ಸಮಿತಿಯನ್ನು ರಚಿಸಲಾಗಿದೆ ಎಂದು ತಿಳಿಸಿದರು.

ಸಮಿತಿಯು, ಕನಿಷ್ಠ ಯೋಜನೆಗಳ ನಿರ್ವಹಣಾ ವೆಚ್ಚಕ್ಕೆ ಸರಿದೂಗುವಂತೆ ನೀರಿನ ದರ ಪರಿಷ್ಕರಣೆ ಮಾಡುವ ಬಗ್ಗೆ, ಹನಿ ನೀರಾವರಿ ಅಳವಡಿಸಿದ ಬೆಳೆಗಳಿಗೆ ಹಾಲಿ ಇರುವ ನೀರಿನ ದರಗಳನ್ನು ಪರಿಷ್ಕರಿಸಲು, ಏತ ನೀರಾವರಿ, ಇಆರ್‌ಎಂ ಯೋಜನೆಗಳು ಹಾಗೂ ಸೂಕ್ಷ್ಮ ನೀರಾವರಿ ಅಳವಡಿಸಿದ ಬೆಳೆಗಳಿಗೆ ಪ್ರತ್ಯೇಕ ನೀರಿನ ದರ ನಿಗದಿ ಪಡಿಸುವ ಬಗ್ಗೆ ಹಾಗೂ ಕುಡಿಯುವ ನೀರಿಗಾಗಿ ಕೈಗಾರಿಕೆಗಳಿಗೆ, ಕಾಲುವೆ, ಕೆರೆ, ಅಣೆಕಟ್ಟು ಇತರ ಮೂಲಗಳಿಂದ ಪಡೆಯುವ ನೀರಿನ ದರಗಳನ್ನು ಪರಿಷ್ಕರಿಸುವ ಬಗ್ಗೆ ಅಧ್ಯಯನ ನಡೆಸಿ ಶಿಫಾರಸು ಮಾಡಲಿದೆ ಎಂದು ಸಚಿವರು ನುಡಿದರು. ಇದರೊಂದಿಗೆ ಈ ನಿರ್ವಹಣಾ ವೆಚ್ಚ ಸಂಗ್ರಹದಲ್ಲಿ ದಕ್ಷತೆಯನ್ನು ಹೆಚ್ಚಿಸಲೂ ಕ್ರಮ ಕೈಗೊಳ್ಳಲಾಗುವುದು. ಪ್ರಸ್ತುತ ನಿಗದಿ ಪಡಿಸಿದ ಗುರಿಯ ಶೇ. 25ರಷ್ಟು ಹಣವನ್ನಷ್ಟೇ ಸಂಗ್ರಹಿಸಲಾಗುತ್ತಿದೆ. ಹಂತ ಹಂತವಾಗಿ ಈ ಲೋಪವನ್ನು ಸರಿಪಡಿಸಲಾಗುವುದು. ಸಮರ್ಪಕ ನೀರು ಪೂರೈಕೆಯಾಗುತ್ತಿರುವ ಪ್ರದೇಶದಲ್ಲಿ ಶುಲ್ಕಸಂಗ್ರಹವನ್ನು ಪರಿಣಾಮಕಾರಿಯಾಗಿ ಮಾಡಲು ಕ್ರಮ ಕೈಗೊಳ್ಳಲಾಗುವುದು ಎಂದು ಸಚಿವರು ವಿವರಿಸಿದರು.

### ಕಾಡಾ ಮತ್ತು ವಾಲ್ಮಿ ಸುಧಾರಣೆಗೆ ಕ್ರಮ:

ರಾಜ್ಯದಲ್ಲಿ ಆರು ಅಚ್ಚುಕಟ್ಟು ಅಭಿವೃದ್ಧಿ ಪ್ರಾಧಿಕಾರಗಳಿದ್ದು (ಕಾಡಾ), ಈ ವ್ಯವಸ್ಥೆಯನ್ನು ಇನ್ನಷ್ಟು ಬಲ ಪಡಿಸುವ ಬಗ್ಗೆ ರಚಿಸಲಾದ ಅಧ್ಯಯನ ಸಮಿತಿಯು ರಾಜಸ್ಥಾನ, ಆಂಧ್ರಪ್ರದೇಶ, ಗುಜರಾತ್ ಹಾಗೂ ಮಹಾರಾಷ್ಟ್ರ ರಾಜ್ಯಗಳಿಗೆ ಭೇಟಿ ನೀಡಿ, ಅಲ್ಲಿನ ಕಾಡಾ ಹಾಗೂ ವಾಲ್ಮಿ ಸಂಸ್ಥೆಗಳ ಆಡಳಿತ ವ್ಯವಸ್ಥೆಯನ್ನು ಅಧ್ಯಯನ ಮಾಡಿ ಸೆಪ್ಟೆಂಬರ್ 19 ರಂದು ವರದಿ ಸಲ್ಲಿಸಿದೆ. ಈ ಸಮಿತಿಯು ನೀಡಿರುವ ಶಿಫಾರಸುಗಳ ಅನುಷ್ಠಾನದ ಕುರಿತು ಪರಿಶೀಲಿಸಲಾಗುತ್ತಿದೆ ಎಂದು ಸಚಿವರು ಮಾಹಿತಿ ನೀಡಿದರು. ಸಮಿತಿಯ ಅಧ್ಯಕ್ಷರಾಗಿದ್ದ ಶ್ರೀ ಎಂ. ಶಿವಸ್ವಾಮಿ ಅವರು, ರಾಜ್ಯದಲ್ಲಿ ಕಾಡಾ ಮತ್ತು ವಾಲ್ಮಿಗಳ

ಆಡಳಿತ ವ್ಯವಸ್ಥೆ ಉತ್ತಮವಾಗಿದೆ. ಆದರೆ ಮಾನವ ಸಂಪನ್ಮೂಲದ ಕೊರತೆ, ವಿವಿಧ ಇಲಾಖೆಗಳ ನಡುವಣ ಸಮನ್ವಯದ ಕೊರತೆಯಿಂದಾಗಿ ಅವು ಪರಿಣಾಮಕಾರಿಯಾಗಿ ಕಾರ್ಯನಿರ್ವಹಿಸುತ್ತಿಲ್ಲ. ಈ ಬಗ್ಗೆ ಅಧ್ಯಯನ ವರದಿಯಲ್ಲಿ ಸೂಕ್ತ ಶಿಫಾರಸುಗಳನ್ನು ಮಾಡಲಾಗಿದೆ ಎಂದು ವಿವರಿಸಿದರು.

ಜಲ ಸಂಪನ್ಮೂಲ ಇಲಾಖೆಯನ್ನುಇ ಲೋಕೋಪಯೋಗಿ ಇಲಾಖೆಯಿಂದ ಬೇರ್ಪಡಿಸುವ ಪ್ರಕ್ರಿಯೆ ಶೀಘ್ರವೇ ಪೂರ್ಣಗೊಳ್ಳಲಿದ್ದು, ಇದರಿಂದ ಇಲಾಖೆಯ ವಿಶೇಷ ವಿಷಯಗಳಲ್ಲಿ ಇಂಜಿನಿಯರುಗಳಿಗೆ ತರಬೇತಿ ನೀಡಿ ಅವರ ಸೇವೆಗಳನ್ನು ಪರಿಣಾಮಕಾರಿಯಾಗಿ ಬಳಸಿಕೊಳ್ಳಬಹುದು ಎಂದು ನುಡಿದರು.

**ಸನ್ನತಿ ಏತ ನೀರಾವರಿ ಯೋಜನೆ:**

ಕಲಬುರ್ಗಿ ಮತ್ತು ಯಾದಗಿರಿ ಜಿಲ್ಲೆಯ ಒಟ್ಟು 30 ಹಳ್ಳಿಗಳಿಗೆ ನೀರಾವರಿ ಸೌಲಭ್ಯ ಒದಗಿಸುವ ಉದ್ದೇಶದ ಸನ್ನತಿ ಏತ ನೀರಾವರಿ ಯೋಜನೆಗೆ ಕೇಂದ್ರ ಸರ್ಕಾರದ ಪರಿಸರ ಮತ್ತು ಅರಣ್ಯ ಸಚಿವಾಲಯವು ಪರಿಸರ ತೀರುವಳಿ ನೀಡಿದೆ. ಶೀಘ್ರವೇ ಕೇಂದ್ರ ಜಲ ಆಯೋಗದ ಅನುಮೋದನೆ ಪಡೆದು, ಕೇಂದ್ರ ಧನ ಸಹಾಯ ಪಡೆಯಲು ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ವಿವರಿಸಿದರು.

## ಜಾತಿ ಸಮೀಕ್ಷೆ: ಜನರಲ್ಲಿ ಅರಿವು ಮೂಡಿಸಲು ಪ್ರಚಾರಾಂದೋಲನ: ಸಚಿವ ಎಚ್.. ಆಂಜನೇಯ

ಬೆಂಗಳೂರು, ಡಿ. 1 (ಕರ್ನಾಟಕ ವಾರ್ತೆ)–

ರಾಜ್ಯದಲ್ಲಿ 81 ವರ್ಷಗಳ ನಂತರ ಜಾತಿ ಸಮೀಕ್ಷೆ ನಡೆಯುತ್ತಿದ್ದು, ಎಲ್ಲ ಜಾತಿ, ವರ್ಗಗಳ ಜನರು ಗಣತಿ ಸಂದರ್ಭದಲ್ಲಿ ಸೂಕ್ತ ಮಾಹಿತಿ ನೀಡಿ ಸಹಕರಿಸುವಂತೆ ಸಮಾಜ ಕಲ್ಯಾಣ ಸಚಿವ ಶ್ರೀ ಎಚ್. ಆಂಜನೇಯ ಅವರು ಮನವಿ ಮಾಡಿದರು.

ಹಿಂದುಳಿದ ವರ್ಗಗಳ ಆಯೋಗದ ವತಿಯಿಂದ ಜಾತಿ ಸಮೀಕ್ಷೆ ಕುರಿತು ಸಾಹಿತಿಗಳು, ಚಿಂತಕರು, ಕಲಾವಿದರೊಂದಿಗೆ ಏರ್ಪಡಿಸಲಾಗಿದ್ದ ಸಮಾಲೋಚನಾ ಸಭೆಯ ನಂತರ ಪತ್ರಕರ್ತರೊಂದಿಗೆ ಮಾತನಾಡಿದ ಸಚಿವರು, ಜಾತಿ ಸಮೀಕ್ಷೆಯ ಸಂದರ್ಭದಲ್ಲಿ ಎಲ್ಲ ಸಮುದಾಯಗಳ ಜನರು ಯಾವುದೇ ಹಿಂಜರಿಕೆ, ಕೀಳರಿಮೆಯಿಲ್ಲದೆ ಮಾಹಿತಿ ಒದಗಿಸುವ ಬಗ್ಗೆ ಜನರಲ್ಲಿ ಅರಿವು ಮೂಡಿಸಲು, ಅವರ ಮನವೊಲಿಸಲು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಮೂಲಕ ಪ್ರಚಾರಾಂದೋಲನ ಏರ್ಪಡಿಸಲಾಗುವುದು. ಹಿಂದುಳಿದ ವರ್ಗಗಳಿಗೆ ಸರ್ಕಾರದ ಸೌಲಭ್ಯ ಒದಗಿಸಲು, ನಿಖರವಾದ ವೈಜ್ಞಾನಿಕ ಮಾಹಿತಿಯಿಂದ ಹೆಚ್ಚು ಅನುಕೂಲವಾಗಲಿದೆ. ಸರಿಯಾದ ಅಂಕಿ ಅಂಶಗಳಿದ್ದರೆ, ಅಂತಹ ಜನರಿಗೆ ಅಗತ್ಯ ಸೌಲಭ್ಯ ಒದಗಿಸುವುದು ಸುಲಭವಾಗುವುದು. ಈ ಬಗ್ಗೆ ಜನರಲ್ಲಿ ಅರಿವು ಮೂಡಿಸುವ ಬಗ್ಗೆ ಚರ್ಚಿಸಲು ಈ ಸಭೆ ನಡೆಸಲಾಯಿತು ಎಂದು ಸಚಿವರು ವಿವರಿಸಿದರು.

ಜಾತಿವಾರು ಸಾಮಾಜಿಕ ಮತ್ತು ಆರ್ಥಿಕ ಗಣತಿಗೆ ಸಿದ್ಧತೆಗಳು ಸಮರೋಪಾದಿಯಲ್ಲಿ ಸಾಗಿದ್ದು, ಶೀಘ್ರವೇ ಜಿಲ್ಲಾ ಉಸ್ತುವಾರಿ ಪ್ರಧಾನ ಕಾರ್ಯದರ್ಶಿಗಳು, ಜಿಲ್ಲಾಧಿಕಾರಿಗಳು, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು ಹಾಗೂ ಮಹಾನಗರ ಪಾಲಿಕೆಗಳ ಆಯುಕ್ತರಿಗೆ ಒಂದು ದಿನದ ಕಾರ್ಯಾಗಾರ ಏರ್ಪಡಿಸಲಾಗುವುದು. ಸಮೀಕ್ಷೆ ಕಾರ್ಯಕ್ಕೆ ಶಿಕ್ಷಕರನ್ನು ಬಳಸಿಕೊಳ್ಳುತ್ತಿಲ್ಲ. ಕಂದಾಯ ಇಲಾಖೆ ಸಿಬ್ಬಂದಿ, ಅಂಗನವಾಡಿ ಮತ್ತು ಆಶಾ ಕಾರ್ಯಕರ್ತೆಯರ ಸೇವೆಯನ್ನು ಬಳಸಿಕೊಳ್ಳಲಾಗುವುದು. ಗಣತಿಗಾಗಿ 1.2 ಲಕ್ಷ ಸಿಬ್ಬಂದಿ ಅಗತ್ಯವಿದ್ದು, ಈಗಾಗಲೇ 60 ಸಾವಿರ ಜನರನ್ನು ನೇಮಕ ಮಾಡಿ ತರಬೇತಿ ನೀಡಲಾಗುತ್ತಿದೆ ಎಂದು ಸಮೀಕ್ಷೆಯ ಸಿದ್ಧತಾ ಕಾರ್ಯಗಳನ್ನು ವಿವರಿಸಿದರು.

ಸಭೆಯಲ್ಲಿ ಹಿಂದುಳಿದ ವರ್ಗಗಳ ಆಯೋಗದ ಅಧ್ಯಕ್ಷ ಶ್ರೀ ಕಾಂತರಾಜ, ಜ್ಞಾನಪೀಠ ಪ್ರಶಸ್ತಿ ಪುರಸ್ಕೃತ ಡಾ. ಚಂದ್ರಶೇಖರ ಕಂಬಾರ, ನಾಡೋಜ ಹಂ.ಪ. ನಾಗರಾಜಯ್ಯ, ಸಂಗೀತ ನಿರ್ದೇಶಕ, ಚಿತ್ರ ಸಾಹಿತಿ ಶ್ರೀ ಹಂಸಲೇಖಾ,

ಸಾಹಿತಿ ಡಾ. ಸಿದ್ಧಲಿಂಗಯ್ಯ, ಕರ್ನಾಟಕ ಚಲನಚಿತ್ರ ಅಕಾಡೆಮಿ ಅಧ್ಯಕ್ಷ ಶ್ರೀ ಎಸ್.ವಿ. ರಾಜೇಂದ್ರಸಿಂಗ್‌ಬಾಬು, ಶ್ರೀ ಜಿ.ಕೆ. ಸತ್ಯ, ಹಿಂದುಳಿದ ವರ್ಗಗಳ ಆಯೋಗದ ಮಾಜಿ ಅಧ್ಯಕ್ಷ ಶ್ರೀ ದ್ವಾರಕಾನಾಥ್, ಹಿಂದುಳಿದ ವರ್ಗಗಳ ಒಕ್ಕೂಟದ ಅಧ್ಯಕ್ಷ ಶ್ರೀ ಬಿ.ಕೆ. ರವಿ, ದೇವರಾಜ ಅರಸು ಅಭಿವೃದ್ಧಿ ನಿಗಮದ ಅಧ್ಯಕ್ಷ ಶ್ರೀ ರಾಮಚಂದ್ರಪ್ಪ, ಕನ್ನಡ ಮತ್ತು ಸಂಸ್ಕೃತಿ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಹಾಗೂ ಹಿಂದುಳಿದ ವರ್ಗಗಳ ಅಭಿವೃದ್ಧಿ ಇಲಾಖೆಯ ಪ್ರಧಾನ ಕಾರ್ಯದರ್ಶಿ ಡಾ. ಶಾಲಿನಿ ರಜನೀಶ್, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ನಿರ್ದೇಶಕ ಶ್ರೀ ಎನ್.ಆರ್. ವಿಶುಕುಮಾರ್ ಮೊದಲಾದವರು ಪಾಲ್ಗೊಂಡಿದ್ದರು.

## ವಿಶ್ವ ವಿಕಲಚೇತನರ ದಿನಾಚರಣೆ

**ಬೆಂಗಳೂರು, ಡಿಸೆಂಬರ್ 1 (ಕರ್ನಾಟಕ ವಾರ್ತೆ)**

**ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ನಿರ್ದೇಶನಾಲಯದ ವತಿಯಿಂದ ಡಿಸೆಂಬರ್ 3 ರಂದು ವಿಶ್ವ ವಿಕಲಚೇತನರ ದಿನಾಚರಣೆ - 2014 ಅನ್ನು ನಗರದ ಕಂಠೀರವ ಒಳಾಂಗಣ ಕ್ರೀಡಾಂಗಣದಲ್ಲಿ ಹಮ್ಮಿಕೊಳ್ಳಲಾಗಿದೆ.**

**ಈ ಸಂದರ್ಭದಲ್ಲಿ ವಿಕಲಚೇತನರ ಕ್ಷೇತ್ರದಲ್ಲಿ ಸೇವೆ ಸಲ್ಲಿಸುತ್ತಿರುವ ಸ್ವಯಂ ಸೇವಾ ಸಂಸ್ಥೆಗಳಿಗೆ, ವ್ಯಕ್ತಿಗಳಿಗೆ ಹಾಗೂ ವಿಶೇಷ ಶಿಕ್ಷಕರಿಗೆ ಪ್ರಶಸ್ತಿ ಪ್ರದಾನ ಮಾಡಲಾಗುವುದು. ಸೌಲಭ್ಯಗಳನ್ನು ವಿತರಿಸಲಾಗುವುದು. ಈ ಸಮಾರಂಭದ ಉದ್ಘಾಟನೆಯನ್ನು ಮುಖ್ಯಮಂತ್ರಿ ಶ್ರೀ ಸಿದ್ದರಾಮಯ್ಯ ಅವರು ನೆರವೇರಿಸಲಿದ್ದಾರೆ. ಮೂಲ ಸೌಲಭ್ಯ ಅಭಿವೃದ್ಧಿ, ವಾರ್ತಾ ಹಾಗೂ ಸಾರ್ವಜನಿಕ ಸಂಪರ್ಕ ಹಾಗೂ ಹಜ್ ಸಚಿವ ಶ್ರೀ ಆರ್. ರೋಷನ್ ಬೇಗ್ ಅವರು ಸಮಾರಂಭದ ಅಧ್ಯಕ್ಷತೆಯನ್ನು ವಹಿಸಲಿದ್ದಾರೆ. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವೆ ಶ್ರೀಮತಿ ಉಮಾಶ್ರೀ, ಸಾರಿಗೆ ಸಚಿವ ಶ್ರೀ ರಾಮಲಿಂಗಾರೆಡ್ಡಿ, ಕಾನೂನು, ಸಂಸದೀಯ ವ್ಯವಹಾರಗಳು, ಪಶುಸಂಗೋಪನೆ ಹಾಗೂ ಮುಜರಾಯಿ ಸಚಿವ ಶ್ರೀ ಟಿ. ಬಿ. ಜಯಚಂದ್ರ, ಗೃಹ ಸಚಿವ ಶ್ರೀ ಕೆ.ಜೆ. ಜಾರ್ಜ್, ಕಂದಾಯ ಸಚಿವ ಶ್ರೀ ವಿ. ಶ್ರೀನಿವಾಸ ಪ್ರಸಾದ್, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ಶ್ರೀ ಯು.ಟಿ. ಖಾದರ್, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಮಹಾಪೌರರಾದ ಶ್ರೀಮತಿ ಎನ್. ಶಾಂತಕುಮಾರಿ, ವಿಧಾನ ಪರಿಷತ್ ಸದಸ್ಯರು, ವಿಧಾನಸಭಾ ಸದಸ್ಯರು ಸೇರಿದಂತೆ ಅನೇಕ ಸಚಿವರು ಉಪಸ್ಥಿತರಿರುವರು.**

ಸಮ:ಬಾಬು:ಜಿಪಿಆರ್

## ಸ್ಯಾನಿಟರಿ ನ್ಯಾಪ್‌ಕಿನ್ ತಯಾರಿಕಾ ಘಟಕಕ್ಕೆ ಅರ್ಜಿ ಆಹ್ವಾನ

**ಬೆಂಗಳೂರು, ಡಿಸೆಂಬರ್ 1 (ಕರ್ನಾಟಕ ವಾರ್ತೆ**

**ಸ್ತ್ರೀಶಕ್ತಿ ಗುಂಪು/ಒಕ್ಕೂಟಗಳ ಮೂಲಕ ಬೆಂಗಳೂರು ನಗರ ಜಿಲ್ಲೆ/ತಾಲ್ಲೂಕುಗಳಲ್ಲಿ ಸ್ಯಾನಿಟರಿ ನ್ಯಾಪ್‌ಕಿನ್ ತಯಾರಿಸುವ ಘಟಕಗಳನ್ನು ಸ್ಥಾಪಿಸಲು ಸರ್ಕಾರವು ಉದ್ದೇಶಿಸಿದೆ.**

ಈ ಯೋಜನೆಯಡಿ ಘಟಕ ಪ್ರಾರಂಭಿಸಲು ಬಯಸುವ ಸ್ತ್ರೀಶಕ್ತಿ ಗುಂಪುಗಳು/ಒಕ್ಕೂಟಗಳು ಯಂತ್ರೋಪಕರಣಗಳ ಖರೀದಿಗೆ ಅವಶ್ಯವಿರುವ ಅಂದಾಜು ರೂ 3.00 ರಿಂದ 3.50 ಲಕ್ಷ ಬಂಡವಾಳ ಹೂಡಲು ಶಕ್ತರಿರಬೇಕು ಹಾಗೂ ಘಟಕ ಸ್ಥಾಪಿಸಲು ನೀರು, ವಿದ್ಯುತ್‌ಚ್ಛಕ್ತಿ ಸೌಲಭ್ಯದೊಂದಿಗೆ ಕನಿಷ್ಠ 3 ರಿಂದ 4 ಕೊಠಡಿಗಳುಳ್ಳ ಸ್ಥಳಾವಕಾಶ ಹೊಂದಿರಬೇಕು. ಉತ್ಪಾದಿಸಿದ ಉತ್ಪನ್ನಗಳನ್ನು ಮಾರಾಟ ಮಾಡುವ ಜವಾಬ್ದಾರಿ ತೆಗೆದುಕೊಳ್ಳಬೇಕು. ಮೇಲಿನ ಅರ್ಹತೆ ಹೊಂದಿರುವ ಸ್ತ್ರೀಶಕ್ತಿ ಗುಂಪು/ಒಕ್ಕೂಟಗಳು ನಿಗದಿತ ಅರ್ಜಿಯನ್ನು ಉಪ ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಬೆಂಗಳೂರು ನಗರ ಜಿಲ್ಲೆ, ದೂರವಾಣಿ ಸಂಖ್ಯೆ : 080 –26578688 ಅಥವಾ ಆನೇಕಲ್/ಬೆಂಗಳೂರು ಉತ್ತರ/ಬೆಂಗಳೂರು ದಕ್ಷಿಣ ತಾಲ್ಲೂಕು ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳಿಂದ ಪಡೆದು ಅಗತ್ಯ ದಾಖಲಾತಿಗಳೊಂದಿಗೆ ಜಿಲ್ಲಾ ಉಪ ನಿರ್ದೇಶಕರಿಗೆ ಸಲ್ಲಿಸುವುದು. ಅರ್ಜಿ ಸಲ್ಲಿಸಲು ಡಿಸೆಂಬರ್ 18 ಕೊನೆಯ ದಿನ ಎಂದು ಬೆಂಗಳೂರು ನಗರ ಜಿಲ್ಲೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಪ್ರಕಟಣೆ ತಿಳಿಸಿದೆ.

ಸಮ:ಬಾಬು:ಜಿಪಿಆರ್.

ವಾರ್ತಾ ವಿಶೇಷ :

## ಸಣ್ಣ ಕೈಗಾರಿಕಾ ಅಭಿವೃದ್ಧಿ ನಿಗಮ ಸಾಧನೆ

ಕರ್ನಾಟಕ ರಾಜ್ಯ ಸಣ್ಣ ಕೈಗಾರಿಕೆಗಳ ಅಭಿವೃದ್ಧಿ ನಿಗಮ ನಿಯಮಿತವು ಸಣ್ಣ ಪ್ರಮಾಣದ ಕೈಗಾರಿಕಾ ಕ್ಷೇತ್ರದ ಅಭಿವೃದ್ಧಿಗಾಗಿ ಅಪಾರವಾದ ಕೊಡುಗೆಯನ್ನು ನೀಡಿದ್ದು, 175 ಕೈಗಾರಿಕಾ ವಸಾಹತುಗಳ ಸ್ಥಾಪನೆ, 17 ಕಚ್ಚಾ ಸಾಮಾಗ್ರಿ ಡಿಪೋಗಳ ಸ್ಥಾಪನೆ, ತಾಂತ್ರಿಕ ಬೆಂಬಲ ಸೇವೆಗಳು ಹಾಗೂ ಹಿಂದುಳಿದ ಪ್ರದೇಶಗಳು ಸೇರಿದಂತೆ ರಾಜ್ಯದೆಲ್ಲೆಡೆ ತನ್ನ ಅಸ್ತಿತ್ವವನ್ನು ಹೊಂದಿ, ನಿಗಮವು ಸಣ್ಣ ಪ್ರಮಾಣದ ಕೈಗಾರಿಕೆಗಳ ಅಭಿವೃದ್ಧಿಗಾಗಿ ರಾಜ್ಯದ ನೋಡಲ್ ಅಭಿವೃದ್ಧಿ ಸಂಸ್ಥೆಯಾಗಿ ಶ್ರಮಿಸುತ್ತಿದೆ.

ಕರ್ನಾಟಕ ರಾಜ್ಯದಲ್ಲಿ ಸಣ್ಣ ಕೈಗಾರಿಕಾ ವಲಯದ ಸಮಗ್ರ ಅಭಿವೃದ್ಧಿ, ಗ್ರಾಮೀಣ ಉದ್ಯೋಗಾವಕಾಶಗಳ ಹೆಚ್ಚಳ, ಆರ್ಥಿಕ ಅಭಿವೃದ್ಧಿ, ಗ್ರಾಮೀಣ ಪ್ರದೇಶಗಳ ಆರ್ಥಿಕ ಸ್ವಾವಲಂಬನೆ, ಗ್ರಾಮೀಣ ಪ್ರತಿಭೆಗಳ ಪಟ್ಟಣದ ವಲಸೆಗಳ ನಿರ್ಬಂಧ ಈ ಎಲ್ಲ ಧ್ಯೇಯ–ಧೋರಣೆಗಳನ್ನು ಕರ್ನಾಟಕ ರಾಜ್ಯ ಸಣ್ಣ ಕೈಗಾರಿಕೆಗಳ ಅಭಿವೃದ್ಧಿ ನಿಗಮ ನಿಯಮಿತವು ಮುಂದುವರಿಸಿಕೊಂಡು ಹೋಗುವ ದೃಢ ನಿಶ್ಚಯವನ್ನು ಹೊಂದಿದೆ.

ನಿಗಮವು ರಾಜ್ಯಾದ್ಯಂತ ಒಟ್ಟು 175 ಕೈಗಾರಿಕಾ ವಸಾಹತುಗಳನ್ನು ಸ್ಥಾಪಿಸಿದ್ದು ಇವುಗಳಲ್ಲಿ ವಿವಿಧ ರೀತಿಯ 5573 ಮಳಿಗೆಗಳು, 184 ಪ್ಲಾಟ್ಡ್ ಫ್ಯಾಕ್ಟರಿಗಳು, 175 ಶಾಪ್‌ಗಳು, 245 ಗೋದಾಮುಗಳು, 7617 ಕೈಗಾರಿಕಾ ನಿವೇಶನಗಳನ್ನು ನಿರ್ಮಾಣ ಮಾಡಿ ಅರ್ಹ ಕೈಗಾರಿಕೋದ್ಯಮಿಗಳಿಗೆ ಹಂಚಿಕೆ ಮಾಡಲಾಗಿರುತ್ತದೆ. ಹಾಗೂ ನಿಗಮವು 809 ವಿಶ್ವ ಮಳಿಗೆಗಳನ್ನು ಗ್ರಾಮೀಣ ಪ್ರದೇಶಗಳಲ್ಲಿ ನಿರ್ಮಿಸಿ ಸಂಘ ಸಂಸ್ಥೆಗಳಿಗೆ ಗುಡಿ ಕೈಗಾರಿಕೆಗಳಿಗಾಗಿ ಹಂಚಿಕೆ ಮಾಡಲಾಗಿರುತ್ತದೆ. 2013–14 ನೇ ಸಾಲಿನಲ್ಲಿ ಇವುಗಳಿಂದ ನಿಗಮಕ್ಕೆ ಕ್ರಮವಾಗಿ ಮಳಿಗೆ ಮಾರಾಟದಿಂದ ರೂ 6,38,45,961/–, ಕಂತು ಖರೀದಿ ಬಡ್ಡಿ ರೂ 2,42,55,559/–, ದಂಡ ಬಡ್ಡಿ

ರೂ 2,23,06,780/- ಬಾಡಿಗೆ ಮತ್ತು ವಿಶ್ವ ಬಾಡಿಗೆ ರೂ 4,69,98,122/-, ನೀರು ಶುಲ್ಕ ರೂ 11,66,266/-, ಸೇವಾ ಶುಲ್ಕ ರೂ 70,61,400/- ಮತ್ತು ಐಟಿಬಿಟಿಯಿಂದ ರೂ 2,23,81,835/- ಗಳ ಆದಾಯ ಬಂದಿದೆ.

ಕೈಗಾರಿಕಾ ಕಚ್ಚಾ ಸಾಮಗ್ರಿಗಳನ್ನು ಖರೀದಿಸಿ ಅವುಗಳನ್ನು ಸಣ್ಣ ಕೈಗಾರಿಕಾ ಘಟಕಗಳಿಗೆ ಮಾರಾಟ ಮಾಡುವುದು ನಿಗಮದ ಮತ್ತೊಂದು ಚಟುವಟಿಕೆಯಾಗಿರುತ್ತದೆ. 2013-14 ನೇ ಸಾಲಿನಲ್ಲಿ ರಾಜ್ಯಾದ್ಯಂತ ಇರುವ 17 ಕಚ್ಚಾ ಸಾಮಗ್ರಿ ಡಿಪೋಗಳ ಮೂಲಕ ಮಾರಾಟ ಮಾಡಿರುವ ವಿವರಗಳು ಈ ರೀತಿ ಇರುತ್ತವೆ. ಕಬ್ಬಿಣ ಮತ್ತು ಉಕ್ಕು 11681 ಮೆ. ಟನ್ಸ್ , ಕೋಲ್ 35415 ಮೆ.ಟನ್ಸ್, ಕ್ಯಾರಫಿನ್ ವ್ಯಾಕ್ಸ್ 69 ಮೆ.ಟನ್ಸ್, ಸಿಮೆಂಟ್ 750 ಮೆ. ಟನ್ಸ್‌ಗಳ ಮಾರಾಟ ಮಾಡಲಾಗಿದೆ.

ಸರ್ಕಾರದಿಂದ ಹಾಗೂ ಕೆ.ಐ.ಎ.ಡಿ.ಬಿ. ಯಿಂದ ಭೂಮಿಯನ್ನು ಸ್ವಾಧೀನಪಡಿಸಿಕೊಂಡು ಕೈಗಾರಿಕಾ ಮಳಿಗೆ ಮತ್ತು ನಿವೇಶನಗಳನ್ನು ನಿರ್ಮಿಸುವುದು ನಿಗಮದ ಮತ್ತೊಂದು ಕಾರ್ಯ ಚಟುವಟಿಕೆಯಾಗಿರುತ್ತದೆ. 2013-14 ನೇ ಸಾಲಿನಲ್ಲಿ ಸ್ವಾಧೀನಪಡಿಸಿಕೊಂಡಿರುವ ವಿವರಗಳು ಈ ರೀತಿ ಇರುತ್ತವೆ

- ಬೆಳಗಾವಿ ಜಿಲ್ಲೆ, ಚಿಕ್ಕೋಡಿ ತಾಲ್ಲೂಕು, ಬೋರಗಾಂವ್‌ನಲ್ಲಿ 75 ಎಕರೆ
- ಗುಲ್ಬರ್ಗಾ ಜಿಲ್ಲೆ, ಚಿತ್ತಾಪುರದಲ್ಲಿ 27.35 ಎಕರೆ.
- ಕೊಪ್ಪಳ ಜಿಲ್ಲೆ, ಬಸಾಪುರದಲ್ಲಿ 104.10 ಎಲರೆ/
- ತುಮಕೂರು ಜಿಲ್ಲೆ, ವಸಂತನರಸಾಪುರದಲ್ಲಿ 50.00 ಎಕರೆ.
- ಚಿಕ್ಕಮಗಳೂರು ಜಿಲ್ಲೆ, ಕೊಪ್ಪ ತಾಲ್ಲೂಕು, ಹರಿಹರಪುರದಲ್ಲಿ 7.20 ಎಕರೆ.

ನಿಗಮದ ನಿರ್ಮಾಣ ಮತ್ತು ಉಸ್ತುವಾರಿ ವಿಭಾಗವು ಪ್ರಸ್ತುತ ಸಾಲಿನಲ್ಲಿ ಈ ಕೆಳಗಿನ 11 ಹೊಸ ಕೈಗಾರಿಕಾ ವಸಾಹತುಗಳ ಅಭಿವೃದ್ಧಿ ಕಾರ್ಯಗಳನ್ನು ಕೈಗೆತ್ತಿಗೊಂಡಿದೆ.

- ಚಳ್ಳಕರೆ, ಹುಮ್ನಾಬಾದ್ 2ನೇಹಂತ, ಕುಡಮಲಕುಂಟೆ ಹಾಗೂ ರಾಣೆಬೆನ್ನೂರು 2ನೇ ಹಂತಗಳಲ್ಲಿ ಅಭಿವೃದ್ಧಿ ಕಾರ್ಯ ಮುಗಿದಿರುತ್ತದೆ.
- ಬಿಜಾಪುರ (ಹಳೆಯ) ಮೂಲಭೂತ ಸೌಕರ್ಯ ಉನ್ನತೀಕರಣ ಕೆಲಸ ಮುಗಿದಿರುತ್ತದೆ.
- ಹೊಸ ಕೈಗಾರಿಕಾ ವಸಾಹತು ನೆಲಮಂಗಲ ಮುಗಿಯುವ ಹಂತದಲ್ಲಿದೆ.
- ಹೊಸ ಕೈಗಾರಿಕಾ ವಸಾಹತು, ಬೋರಗಾಂವ್, ಚಿಕ್ಕೋಡಿ, ಚಿಂಚೂಲಿ, ಸೊಂಡೂರು, ಪಾವಗಡ 2ನೇಹಂತ ಮತ್ತು ಮೂಲಭೂತ ಸೌಕರ್ಯ ಉನ್ನತೀಕರಣ ಕೆಲಸ ಅಂತರಸನಹಳ್ಳಿ 1 ಮತ್ತು 2ನೇ ಹಂತ, ಶಿವಮೊಗ್ಗ ಮಂಡ್ಲಿ-ಕಲ್ಲೂರುನಲ್ಲಿ ಕೆಲಸಗಳು ಪ್ರಗತಿಯಲ್ಲಿವೆ.
- ಚಳ್ಳಕೆರೆಯಲ್ಲಿ 24 ಡಿ ಮಾದರಿ ಮಳಿಗೆಗಳು ಮತ್ತು ಚಾಮರಾಜನಗರದಲ್ಲಿ 20 ಡಿ ಮಾದರಿ ಮಳಿಗೆಗಳ ನಿರ್ಮಾ ಕೆಲಸವು ಕರ್ನಾಟಕ ಸರ್ಕಾರದ ಟಿ.ಎಸ್.ಪಿ. ಯೋಜನೆಯಲ್ಲಿ ಕೈಗೆತ್ತಿಗೊಂಡಿದೆ.

ಹಾಗೆಯೇ, ನಿಗಮವು ಯೋಜನೆಯಲ್ಲಿ ಜಿ.ಟಿ.ಟಿ.ಸಿ. ಡಿ.ಐ.ಸಿ., ಮುಜರಾಯಿ ಇಲಾಖೆಗಳ

ಕಾಮಗಾರಿಗಳನ್ನು ಸಹ ಮಾಡುತ್ತಿದೆ. ಸಂಸ್ಥೆಯು ತನ್ನ ಕಾರ್ಯವ್ಯಾಪ್ತಿಯನ್ನು ವಿಸ್ತ್ರತಗೊಳಿಸುವ ನಿಟ್ಟಿನಲ್ಲಿ ಹಲವಾರು ನೂತನ ಯೋಜನೆಗಳನ್ನು ಕೈಗೊಳ್ಳಲು ಪ್ರಯತ್ನಗಳನ್ನು ನಡೆಸುತ್ತಿದೆ.

ಬರಹ : ಟಿ.ಸಿ. ಮಂಜುನಾಥ ಬಾಬು
ಸಹಾಯಕ ನಿರ್ದೇಶಕರು

## ಪದವೀಧರರ ನೋಂದಣಿಗೆ ಅರ್ಜಿ ಆಹ್ವಾನ

ಬೆಂಗಳೂರು, ಡಿಸೆಂಬರ್ 1 (ಕರ್ನಾಟಕ ವಾರ್ತೆ)

ಬೆಂಗಳೂರು ಕೃಷಿ ವಿಶ್ವವಿದ್ಯಾನಿಲಯದಲ್ಲಿ ವಿವಿಧ ವಿಷಯಗಳಲ್ಲಿ ಪದವಿ ಪಡೆದು 5 ವರ್ಷ ಪೂರೈಸಿದ ಪದವೀಧರರಿಂದ "ನೋಂದಾಯಿತ ಪದವೀಧರರಾಗಿ" ನೋಂದಣಿ ಮಾಡಿಸಲು ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಭರ್ತಿ ಮಾಡಿದ ಅರ್ಜಿಗಳನ್ನು ಹಣಕಾಸು ನಿಯಂತ್ರಣ ಅಧಿಕಾರಿಗಳು, ಕೃಷಿ ವಿಶ್ವವಿದ್ಯಾನಿಲಯ, ಜಿ.ಕೆ.ವಿ.ಕೆ., ಬೆಂಗಳೂರು ಇವರ ಹೆಸರಿಗೆ ಪಡೆದು ರೂ. 500. ಗಳ ಡಿ.ಡಿ. ಜೊತೆಗೆ ದಿನಾಂಕ 31–12–2014 ರವರೆಗೆ ಕುಲಸಚಿವರ ಕಛೇರಿಗೆ ಸಲ್ಲಿಸಬೇಕು. ತಡವಾಗಿ ಬಂದ ಅರ್ಜಿಗಳು/ ಅಪೂರ್ಣ ಹಾಗೂ ನಿಗದಿತ ಶುಲ್ಕ ಭರಿಸದಿದ್ದರೆ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

ಹೆಚ್ಚಿನ ವಿವರಗಳಿಗೆ ಕುಲಸಚಿವರ ಕಛೇರಿಯ ದೂರವಾಣಿ ಸಂಖ್ಯೆ: 080–23330984/23330149 ನಲ್ಲಿ ಸಂಪರ್ಕಿಸಿ ಅಥವಾ ವಿಶ್ವವಿದ್ಯಾನಿಲಯವ ವೆಬ್‌ಸೈಟ್: www.uasbangalore.edu.in ನಲ್ಲಿ ಪಡೆಯಬಹುದು.

ಸಮ:ಬಾಬು:ಜಿಪಿಆರ್.

## REGISTRATION OF GRADUATES

Bangalore, December 1 (Karnataka Information)

Applications are invited by the University of Agricultural Sciences, Bangalore from the eligible graduates to register as "REGISTERED GRADUATES". The graduates of the University of Agricultural Sciences, Bangalore who have completed five years after conferring the degree at the Convocation are eligible. The filled in application along with the DD of Rs. 500/- drawn in favour of Comptroller, UAS, Bangalore can be submitted to Registrar, UAS,

**GKVK, Bangalore on or before 31-12-2014. The prescribed application forms can be downloaded from the UAS website.**

**For details contact University website www.uasbangalore.edu.in or Ph. No. 080-23330984/ 23330149.**

sm/babu/gpr

**ಛಾಯಾಶೀರ್ಷಿಕೆ:**

ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವ ಶ್ರೀ ಹೆಚ್. ಆಂಜನೇಯ ಅವರ ಅಧ್ಯಕ್ಷತೆಯಲ್ಲಿ ಇಂದು ಬೆಳಿಗ್ಗೆ 10–00 ಗಂಟೆಗೆ ವಿಕಾಸಸೌಧ ಸಮ್ಮೇಳನ ಸಭಾಂಗಣದಲ್ಲಿ ನಡೆದ ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗದ ವತಿಯಿಂದ ನಡೆಸಲಾಗುತ್ತಿರುವ ಸಮೀಕ್ಷೆಯ ಬಗ್ಗೆ ಚರ್ಚಿಸಲು ನಾಡಿನ ಪ್ರಮುಖ ಸಾಹಿತಿಗಳು, ಕಲಾವಿದರು ಹಾಗೂ ಬುದ್ಧಿಜೀವಿಗಳ ಸಭೆಯನ್ನು ಆಯೋಜಿಸಲಾಗಿತ್ತು. ಈ ಸಂದರ್ಭದಲ್ಲಿ ಜ್ಞಾನಪೀಠ ಪ್ರಶಸ್ತಿ ವಿಜೇತ ಡಾ. ಚಂದ್ರಶೇಖರ ಕಂಬಾರ ಹಾಗೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖಾ ಪ್ರಧಾನ ಕಾರ್ಯದರ್ಶಿ ಡಾ. ಶಾಲಿನಿ ರಜನೀಶ್ ಅವರನ್ನು ಚಿತ್ರದಲ್ಲಿ ಕಾಣಬಹುದು.